ಆ) 1997-98 ಮತ್ತು 1998-99 ನೇ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳ ವಿವರ ಈ ಕೆಳಗಿನಂತಿದೆ.

ಕಾಮಗಾರಿಗಳ ಹೆಸರು	ಕಾಮಗಾರಿಗಳ ಸಂಖ್ಯೆ 1997-98	1998-99
1. ರಸ್ತೆಗಳು	395	111
2. ಚಿಕ್ಕನೀರಾವರಿ	225	63
3. ಶಾಲಾಕಟ್ಟಡಗಳು	488	160
4. ಅಂಗನವಾಡಿ ಕಟ್ಟಡಗಳು	135	20
5. ಸಮುದಾಯ ಭವನ	-	17
6. ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳು	-	-
ಒಟ್ಟು :	1243	371

ಇ) ಈ ಯೋಜನೆಯ ಕಾಮಗಾರಿಗಳಿಗೆ ಇಲ್ಲಿಯವರೆಗೆ ಈ ಕೆಳಕಂಡಂತೆ ಖರ್ಚು ಮಾಡಲಾಗಿರುತ್ತದೆ. (ರೂ. ಲಕ್ಷಗಳಲ್ಲಿ)

ಕಾಮಗಾರಿಗಳ ಹೆಸರು	1997-99	1998-99
1. ರಸ್ತೆಗಳು	697.46	102.34
2. ಸಣ್ಣ ನೀರಾವರಿ	343.74	54.06
3. ಶಾಖಾ ಕಟ್ಟಡಗಳು	251.58	44.44
4. ಅಂಗನವಾಡಿ ಕಟ್ಟಡಗಳು	142.65	14.72
5. ಸಮುದಾಯ ಭವನ	-	19.48
6. ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳು	185.84	138.97
ಒಟ್ಟು :	1621,27	373.98

ಈ) ಪ್ರಸಕ್ತ 1999-2000ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಉದ್ಯೋಗ ಭರವಸೆ ಯೋಜನೆಯ ಮಾರ್ಗ ಸೂಚಿಗಳನ್ನು ಮಾರ್ಪಾಡು ಮಾಡುವ ಉದ್ದೇಶ ಹೊಂದಿರುವುದರಿಂದ ಸದ್ಯ ಅಪೂರ್ಣ ಕಾಮಗಾರಿಗಳನ್ನು ಮಾತ್ರ ತೆಗೆದುಕೊಳ್ಳಲು ಸೂಚಿಸಲಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಪುನರ್‌ವಿಮರ್ಶಿತ ಮಾರ್ಗಸೂಚಿಗಳು ಬಂದ ನಂತರ ನಿರ್ದಿಷ್ಟವಾದ ಕಾಮಗಾರಿಗಳನ್ನು ಆಯ್ಕೆ ಮಾಡಲಾಗುತ್ತದೆ.

ರಾಜೀವ್‌ಗಾಂಧಿ ಪ್ರತಿಷ್ಠಾನದೊಂದಿಗೆ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಯೋಜನೆ

1049 (1514)

ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) :- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

ಅ) ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ರಾಜೀವ್‌ಗಾಂಧಿ ಪ್ರತಿಷ್ಠಾನದ ಸಹಯೋಗದಿಂದ ಯಾವ ಯಾವ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತಗೊಳಿಸಲಾಗಿದೆ ?

ಆ) ದಕ್ಷಿಣಕನ್ನಡ ಜಿಲ್ಲೆಯ ಯಾವ ಪ್ರದೇಶಗಳಲ್ಲಿ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗಿದೆ ?

ಇ) ಇದಕ್ಕಾಗಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟೆಷ್ಟು ?

ಈ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಯಡಿ ಯಾವ ಯಾವ ಪ್ರದೇಶಗಳಲ್ಲಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ ?

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು)

ಅ) ಈವರೆಗೆ ರಾಜ್ಯದಲ್ಲಿ 'ಸಬ್-ಮಿಷನ್' ಕಾರ್ಯಕ್ರಮದಡಿ ಯಾವುದೇ ಕುಡಿಯುವ ನೀರಿನ ಯೋಜನೆಯು ಪೂರ್ಣಗೊಂಡಿರುವುದಿಲ್ಲ.

ಆ) ಈವರೆಗೆ ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸದರಿ ಕಾರ್ಯಕ್ರಮದಡಿ ಯಾವುದೇ ಯೋಜನೆಯನ್ನು ಕೈಗೆತ್ತಿಕೊಂಡಿರುವುದಿಲ್ಲ

ಇ) ಉದ್ಭವಿಸುವುದಿಲ್ಲ.

ಈ) ಪ್ರಸಕ್ತ ಸಾಲಿನಲ್ಲಿ ಸದರಿ ಕಾರ್ಯಕ್ರಮದಡಿ ಈವರೆಗೆ ಯಾವುದೇ ಯೋಜನೆಯನ್ನು ಕೈಗೆತ್ತಿಕೊಂಡಿರುವುದಿಲ್ಲ.

ಸಬ್-ಮಿಷನ್ ಕಾರ್ಯಕ್ರಮದಡಿ, ಪ್ರಾರಂಭದಿಂದ ಮಾರ್ಚ್-99ರ ಅಂತ್ಯದವರೆಗೆ ರಾಜ್ಯದ 9 ಜಿಲ್ಲೆಗಳಲ್ಲಿ (ದಾವಣಗೆರೆ ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಿಜಾಪುರ, ಉತ್ತರ ಕನ್ನಡ, ಬಳ್ಳಾರಿ ಮತ್ತು ಕೊಪ್ಪಳ) ಒಟ್ಟು ರೂ. 51.69 ಕೋಟಿ ಅಂದಾಜುಮೊತ್ತದಲ್ಲಿ 19 ಯೋಜನೆಗಳು ಅನುಮೋದನೆ ಗೊಂಡಿದ್ದು, ಸದರಿ ಯೋಜನೆಗಳಡಿ ಕುಡಿಯುವ ನೀರಿನಲ್ಲಿ ಅಧಿಕ ಫ್ಲೋರೈಡ್ : ಅಧಿಕ ಲವಣಾಂಶ ಸಮಸ್ಯೆಯಿರುವ 141 ಗ್ರಾಮ : ಜನವಸತಿಗಳಿಗೆ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಯಾಗಲಿದೆ.

ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಕ್ಕೆ ಖರ್ಚು ಮಾಡಿದ ಹಣ

1050(1515)

ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

1) ರಾಜ್ಯ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಮಾಡಿದ ಹಣ ಎಷ್ಟೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು)

2) ಇದರಲ್ಲಿ ಕೇಂದ್ರ ಸರ್ಕಾರದಿಂದ ಮತ್ತು ಇತರ ಮೂಲಗಳಿಂದ ಸಂಗ್ರಹವಾದ ಹಣ ಎಷ್ಟೆಷ್ಟು

3) ಸರ್ಕಾರ ಆಯವ್ಯಯದಲ್ಲಿ ಈ ಉದ್ದೇಶಕ್ಕಾಗಿ ಒದಗಿಸಿದ ಹಣ ಎಷ್ಟು ಮತ್ತು ಖರ್ಚು ಮಾಡಲಾದ ಹಣ ಎಷ್ಟು ?

ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

1) ರಾಜ್ಯ ಸರ್ಕಾರವು ಕಳೆದ 2 ವರ್ಷಗಳಲಿ : ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣಕ್ಕೆ ಈ ಕೆಳಕಂಡಂತೆ ಹಣ ಖರ್ಚು ಮಾಡಿದೆ.